# ರಾಷ್ಟ್ರೀಯ ವಿಜ್ಞಾನ ದಿನಾಚರಣೆ–2023



ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ–2023ನ್ನು ಕೇಂದ್ರ ವಿಷಯ 'ವಿಶ್ವದ ಒಳಿತಿಗಾಗಿ ವಿಶ್ವ ವಿಜ್ಞಾನ' ಎಂಬ ವಿಷಯದ ಮೇಲೆ ಆಯೋಜಿಸಲಾಗಿತ್ತು. ಎನ್.ಐ.ಟಿ.ಕೆ. ಸುರತ್ಕಲ್‌ನ ಕಂಪ್ಯೂಟರ್ ವಿಭಾಗದ ಪ್ರೊ. ಅಣ್ಣಪ್ಪ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ವಿಜ್ಞಾನ, ತಂತ್ರಜ್ಞಾನ ಹಲವು ಕ್ಷೇತ್ರಗಳಲ್ಲಿ ಈಗ ನಮಗೆ ಸವಾಲುಗಳನ್ನು ಎದುರಿಸುವ ಸಾಮಾರ್ಥ್ಯ ನೀಡಿದೆ, ಕೃಷಿ, ನೀರಿನ ನಿರ್ವಹಣೆ, ಪ್ರಾಕೃತಿಕ ವಿಕೋಪಗಳ ಮುನ್ಸೂಚನೆ, ತೆಗೆದುಕೊಳ್ಳಬೇಕಾದ ಮುಂಜಾಗ್ರತೆಗಳು, ಮಾರುಕಟ್ಟೆಯ ಜವಾಬ್ದಾರಿಗಳಲ್ಲಿ ಇತ್ಯಾದಿಗಳಲ್ಲಿ ತಂತ್ರಜ್ಞಾನದ ಬಳಕೆ ಸಹಾಯಕವಾಗುತ್ತಿದೆ. ಕಂಪ್ಯೂಟರ್ ಆಧಾರಿತ ಕೃತಕ ಬುದ್ಧಿಮತ್ತೆ, ರೊಬೊಟ್ ಇತ್ಯಾದಿಗಳ ಭವಿಷ್ಯದ ತಂತ್ರಜ್ಞಾನ ಮನುಕುಲಕ್ಕೆ ಹಲವು ಅನಿರೀಕ್ಷಿತ ಸೌಲಭ್ಯಗಳನ್ನು ನೀಡಲಿದೆ. ಇದನ್ನು ಜಾಗ್ರತೆಯಿಂದ ಉಪಯೋಗಿಸುವುದು ನಮ್ಮ ಕರ್ತವ್ಯ ಎಂದರು. ಜಾಗತಿಕ ಯೋಗಕ್ಷೇಮಕ್ಕಾಗಿ ವಿಜ್ಞಾನವನ್ನು ಬಳಸಿ ಎಲ್ಲರ ಅಭಿವೃದ್ಧಿಗೆ ಶ್ರಮಿಸಬೇಕೆಂದು ಕರೆ ಕೊಟ್ಟರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಶ್ರೀ ಸುಧಾಕರ್ ಕೆ. ಮಾತನಾಡುತ್ತಾ ವಿಜ್ಞಾನ ಕೇಂದ್ರ ಹತ್ತು ಹಲವು ಕಾರ್ಯಕ್ರಮಗಳ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ತನ್ನದೇ ಆದ ಕೊಡುಗೆ ನೀಡುತ್ತಲಿದೆ. ಇಂದಿನ ಯುವಪೀಳಿಗೆಗೆ ಅವಕಾಶಗಳು ವಿಫುಲವಾಗಿದ್ದು ಅವುಗಳನ್ನು ತುಲನಾತ್ಮಕ ದೃಷ್ಟಿಕೋನದಿಂದ ಬೆಳೆಸಿಕೊಂಡು ಅಧ್ಯಯನಶೀಲರಾಗಬೇಕು ಎಂದು ತಿಳಿಹೇಳಿದರು. ಇದೇ ಸಂದರ್ಭದಲ್ಲಿ ಅಧ್ಯಾಪಕರ ವತಿಯಿಂದ ಸೇವೆಯಿಂದ ನಿವೃತ್ತರಾಗುವ ಶ್ರೀ ಸುಧಾಕರ್ ಕೆ. ಅವರನ್ನು ಸನ್ಮಾನಿಸಲಾಯಿತು. ಶ್ರೀ ಸ್ಟಾನಿ ತಾವ್ರೊ ರಾಜ್ಯ ಉಪಾಧ್ಯಕ್ಷರು ಪ್ರೌಢ ಶಾಲಾ ಶಿಕ್ಷಕರ ಸಂಘ ಇವರು ಶ್ರೀಯುತರ ದಕ್ಷತೆ, ಕಾರ್ಯವೈಖರಿ ಹಾಗೂ ವಿಜ್ಞಾನ ಕಾರ್ಯಕ್ರಮಗಳಿಗೆ ಅವರ ಬೆಂಬಲವನ್ನು ಶ್ಲಾಘಿಸಿದರು. ವಿಜ್ಞಾನ ಕೇಂದ್ರದ ನಿರ್ದೇಶಕರು ಡಾ. ಕೆ. ವಿ. ರಾವ್ ಇವರು ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ

ರಾಮನ್‌ರ ಜೀವನ, ಸಂಶೋಧನಾ ಪ್ರೀತಿ, ಸಾಧನೆ ಇದು ಯುವ ಜನಾಂಗಕ್ಕೆ ಆದರ್ಶ ಎಂದರು. ಶ್ರೀ ಜಗನ್ನಾಥ್ ಕಾರ್ಯಕ್ರಮ ನಿರೂಪಿಸಿದರು. ಶ್ರೀ ವಿಘ್ನೇಶ್ ಭಟ್ ಸ್ವಾಗತಿಸಿದರೆ ಶ್ರೀ ಶಿವರಾಮ್ ನಾಯ್ಕ್ ವಂದನಾರ್ಪಣೆಗೈದರು.

ಕಾರ್ಯಕ್ರಮದ ಅಂಗವಾಗಿ ಕೇಂದ್ರದ ವಿಷಯದ ಮೇಲೆ ವಿದ್ಯಾರ್ಥಿಗಳಿಗೆ ಚಿತ್ರಕಲೆ, ಆಶುಭಾಷಣ, ಪ್ರಬಂಧ ಮತ್ತು ರಸಪ್ರಶ್ನೆ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಸಮಾರೋಪ ಸಮಾರಂಭದಲ್ಲಿ ಆಳ್ವಾಸ್ ಇಂಜಿನಿಯರಿಂಗ್ ಕಾಲೇಜಿನ ಪ್ರಾಧ್ಯಾಪಕ ಡಾ. ದಾಮೊದರ ಎನ್. ಮುಖ್ಯ ಅತಿಥಿಯಾಗಿದ್ದರು. ವಿದ್ಯಾರ್ಥಿಗಳು ಇಂತಹ ಅವಕಾಶಗಳನ್ನು ಉಪಯೋಗಿಸಿಕೊಂಡು ವಿಜ್ಞಾನದ ಬಗ್ಗೆ ತಮ್ಮ ಅಭಿರುಚಿಯನ್ನು ಬೆಳೆಸಿಕೊಳ್ಳಬೇಕೆಂದು ಅವರು ಕರೆ ಕೊಟ್ಟರು. ಶ್ರೀ ರಾಮಕೃಷ್ಣ ಮರಾಟಿ ಇವರು ತೀರ್ಪುಗಾರರ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ವಿದ್ಯಾರ್ಥಿಗಳು ದಿನದ ಕಾರ್ಯಕ್ರಮದ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ಸ್ಪರ್ಧೆಗಳ ವಿಜೇತರಿಗೆ ಬಹುಮಾನ ಮತ್ತು ಪ್ರಶಂಸಾ ಪತ್ರಗಳನ್ನು ನೀಡಲಾಯಿತು.















